ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 1–8–2017

# ಪತ್ರಿಕಾ ಆಮಂತ್ರಣ

1. ಪುಟ್ಟೇನಹಳ್ಳಿ ಕೆರೆ ಅಭಿವೃದ್ಧಿ ಕಾಮಗಾರಿ ಶಂಕುಸ್ಥಾಪನಾ ಕಾರ್ಯಕ್ರಮ.

ಭಾಗವಹಿಸುವವರು:
ಬಿ.ರಮಾನಾಥ್ ರೈ, ಅರಣ್ಯ ಸಚಿವರು.

ದಿನಾಂಕ: 2–8–2017 ಬುಧವಾರ, ಸಮಯ: ಬೆಳಿಗ್ಗೆ 10–00 ಗಂಟೆಗೆ
ಸ್ಥಳ: ಪುಟ್ಟೇನಹಳ್ಳಿ ಕೆರೆ, ಯಲಹಂಕ, ಬೆಂಗಳೂರು

2. ಮೊಬೈಲ್ ಆಪ್ ತಂತ್ರಾಂಶದ ಮೂಲಕ ಬೆಳೆ ಕಟಾವು ಪ್ರಯೋಗ ಕೈಗೊಳ್ಳುವ ಮುಖ್ಯ ತರಬೇತುದಾರರ ತರಬೇತಿ ಉದ್ಘಾಟನಾ ಕಾರ್ಯಕ್ರಮ.

ದಿನಾಂಕ: 02–08–2017, ಬುಧವಾರ. ಸಮಯ : 10.30 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ 419, ವಿಕಾಸಸೌಧ, ಬೆಂಗಳೂರು.

3. ಪತ್ರಿಕಾಗೋಷ್ಠಿ:

ಎಲ್. ಗೋಪಾಲಕೃಷ್ಣ,
ಅಧ್ಯಕ್ಷರು,
ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ(ನಿ)

ದಿನಾಂಕ: 2–8–2017 ಬುಧವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ
ಸ್ಥಳ: ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ (ನಿ)
ಎಫ್ ಬ್ಲಾಕ್, 2 ನೇ ಮಹಡಿ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–9

4. ಪತ್ರಿಕಾಗೋಷ್ಠಿ:

ಎಂ.ಬಿ. ಪಾಟೀಲ್,
ಜಲಸಂಪನ್ಮೂಲ ಸಚಿವರು,

ದಿನಾಂಕ: 2–8–2017 ಬುಧವಾರ, ಸಮಯ: ಅಪರಾಹ್ನ 12–00 ಗಂಟೆಗೆ
ಸ್ಥಳ: 344, 3 ನೇ ಮಹಡಿ, ವಿಧಾನ ಸೌಧ, ಬೆಂಗಳೂರು

5. **Solo Art Exhibition Drawing and Painting**
**by Santhoshkumar D.A.**

**Chief Guest:**
**Shri Dr. C. Chandrashekar, Senior Artist**

**Guest of Honour**
**Dr. B.K. Ravi, Registrar, Bangalore University**

**Date: 2-8-2017 Wednesday, Time: 5-30 P.M.**
**Venue: Venkatappa Art Galary, Kasturaba Road,**
**Ambedkar Veedhi, Near Cubbon Park, Bangalore-1**

ಪತ್ರಿಕಾ ಪ್ರಕಟಣೆ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರಾಗಿ ಡಾ|| ಪಿ.ಎಸ್. ಹರ್ಷ ಅಧಿಕಾರ ಸ್ವೀಕಾರ

ಬೆಂಗಳೂರು, ಆಗಸ್ಟ್ 1 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನೂತನ ನಿರ್ದೇಶಕರಾಗಿ ಇಂದು ಐ.ಪಿ.ಎಸ್ ಅಧಿಕಾರಿ ಡಾ.ಪಿ.ಎಸ್.ಹರ್ಷ ಅವರು ಅಧಿಕಾರವಹಿಸಿಕೊಂಡರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾಗಿ ವರ್ಗಾವಣೆಗೊಂಡಿರುವ ಎನ್.ಆರ್.ವಿಶುಕುಮಾರ್ ಅವರಿಂದ ಅಧಿಕಾರವಹಿಸಿಕೊಂಡರು.

ಈ ಸಂದರ್ಭದಲ್ಲಿ ಇಲಾಖೆಯ ಉನ್ನತ ಅಧಿಕಾರಿಗಳಾದ ಎಂ.ರವಿಕುಮಾರ್, ಪಿ.ಎನ್.ಗುರುಮೂರ್ತಿ, ಹೆಚ್.ಬಿ.ದಿನೇಶ್, ಎ.ಆರ್.ಪ್ರಕಾಶ್, ಬಸವರಾಜ ಕಂಬಿ, ದೇವರಾಜಯ್ಯ ಸೇರಿದಂತೆ ಅನೇಕ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಅಧಿಕಾರ ಸ್ವೀಕರಣೆಯ ನಂತರ ಮಾತನಾಡಿದ ಅವರು ಇಲಾಖೆ ಒಂದು ಕುಟುಂಬವಾಗಿ ಕಾರ್ಯನಿರ್ವಹಿಸಲು ಕರೆಕೊಟ್ಟರು.

ಛಾಯಾಚಿತ್ರ ಲಗತ್ತಿಸಿದೆ)

## Counseling of M.Ed. course

**Bangalore August 1, 2017 (Karnataka Information)**

**Owing to unforeseen circumstances, counseling of M.Ed. course is rescheduled to 3rd & 5th August 2017 instead of 1st August 2017 to 5th August 2017.**

## ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ ಪುಸ್ತಕ ಬಹುಮಾನ ಪ್ರದಾನ ಕಾರ್ಯಕ್ರಮ

**ಬೆಂಗಳೂರು, ಆಗಸ್ಟ್ 1 (ಕರ್ನಾಟಕ ವಾರ್ತೆ)**

ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ 2014, 2015 ಮತ್ತು 2016 ನೇ ಸಾಲಿನ ಪುಸ್ತಕ ಬಹುಮಾನ ಪ್ರದಾನ, ಸಾಕ್ಷ್ಯಚಿತ್ರಗಳು ಹಾಗೂ ಪುಸ್ತಕ ಬಿಡುಗಡೆ ಸಮಾರಂಭವನ್ನು ಆಗಸ್ಟ್ 5 ರಂದು ಸಂಜೆ 5.00 ಗಂಟೆಗೆ ಬಾಗಲಕೋಟೆಯ ನವನಗರದಲ್ಲಿರುವ ಡಾ ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಅಕಾಡೆಮಿ ಅಧ್ಯಕ್ಷ ನಾಡೋಜ ಬೆಳಗಲಿ ವೀರಣ್ಣ ಅವರು ತಿಳಿಸಿದರು.

ಇಂದು ಅಕಾಡೆಮಿ ಆವರಣದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಈ ಸಮಾರಂಭದ ಉದ್ಘಾಟನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬಾಗಲಕೋಟೆ ಉಸ್ತುವಾರಿ ಸಚಿವೆ ಶ್ರೀಮತಿ ಉಮಾಶ್ರೀ ಅವರು ನೆರವೇರಿಸಲಿದ್ದಾರೆ ಎಂದು ಹೇಳಿದರು.

ಬಾಗಲಕೋಟೆಯ ಜಿಲ್ಲಾ ಪಂಚಾಯತ್ ಅಧ್ಯಕ್ಷೆ ಶ್ರೀಮತಿ ವೀಣಾ ವ್ಹಿ ಕಾಶಪ್ಪನವರಿಂದ 4 ವರ್ಷಗಳ ಸಾಧನೆಯ ಅಕಾಡೆಮಿ ಪುಸ್ತಕಗಳ ಬಿಡುಗಡೆ ಹಾಗೂ ಮಾಜಿ ಸಚಿವ ಮತ್ತು ಶಾಸಕ ಹೆಚ್. ವೈ. ಮೇಟಿ ಅವರು ಸಮಾರಂಭದ ಅಧ್ಯಕ್ಷತೆ ಹಾಗೂ ಸಾಕ್ಷ್ಯಚಿತ್ರಗಳ ಬಿಡುಗಡೆಯನ್ನು ನೆರವೇರಿಸಲಿದ್ದಾರೆ.

2014 ನೇ ಪುಸ್ತಕ ಬಹುಮಾನ ಪುರಸ್ಕೃತರಾದವರಲ್ಲಿ ಸೇರಾಜೆ ಸೀತಾರಾಮ ಭಟ್ಟ (ಯಕ್ಷಗಾನ ಪ್ರಸಂಗಪಂಚಕ) ಹಾಗೂ ರವಿಶಂಕರ್ ವಳಕ್ಕುಂಜ (ಯಕ್ಷಗಾನ ವಾಚಿಕ ಸಮಾರಾಧನೆ)

2015 ನೇ ಸಾಲಿನ ಪುಸ್ತಕ ಬಹುಮಾನ ಪುರಸ್ಕೃತರಾದವರು ಡಾ. ನಾಗವೇಣಿ ಮಂಚಿ (ಬಲಿಪ ಗಾನಯಾನ)

2016 ನೇ ಸಾಲಿನ ಪುಸ್ಕತ ಬಹುಮಾನ ಪುರಸ್ಕೃತರಾದವರು ಶೇಡಿಗುಮ್ಮೆ ವಾಸುದೇವ ಭಟ್ (ಯಕ್ಷ ಕುಸುಮ) ಡಾ. ಪಾದೇಕಲ್ಲು ವಿಷ್ಣು ಭಟ (ಯಕ್ಷಗಾನಾಧ್ಯಯನ) ಹಾಗೂ ಬೊಟ್ಟಿಕೆರೆ ಪುರುಷೋತ್ತಮ ಪೂಂಜರ (ಅಂಬುರಹ–ಲವ).

ಅಂದು ಮಧ್ಯಾಹ್ನ 3.30 ಗಂಟೆಗೆ ಪುಸ್ತಕ ಪುರಸ್ಕೃತರು, ಸಾಕ್ಷ್ಯಚಿತ್ರ ಕಲಾವಿದರು ಹಾಗೂ ಪುಸ್ತಕದ ರಚನಾಕಾರೊಂದಿಗೆ ಕಲಾತಂಡಗಳೊಂದಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಭವನದವರೆಗೆ ಮೆರವಣಿಗೆಯನ್ನು ಸಹ ಹಮ್ಮಿಕೊಳ್ಳಲಾಗಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕರಡಿ ಮಜಲು, ಹಲಗೆ ಮಜಲು ಹಾಗೂ ಡೊಳ್ಳು ಕುಣಿತ ಕಲಾ ತಂಡಗಳು ತಮ್ಮ ಕಲಾ ಪ್ರದರ್ಶನವನ್ನು ನೀಡಲಿದೆ.

ಈ ಸಂದರ್ಭದಲ್ಲಿ ಸಾಕ್ಷ್ಯಚಿತ್ರ ಸಿ.ಡಿ.ಗಳ ಬಿಡುಗಡೆ, ಪುಸ್ತಕ ಬಿಡುಗಡೆ ಹಾಗೂ ಕಲಾ ಪ್ರದರ್ಶನಗಳನ್ನು ಸಹ ಹಮ್ಮಿಕೊಳ್ಳಲಾಗಿದೆ ಎಂದು ಅವರು ತಿಳಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಕಾಡೆಮಿ ರಿಜಿಸ್ಟ್ರಾರ್ ಎಸ್.ಹೆಚ್.ಶಿವರುದ್ರಪ್ಪ ಮತ್ತು ಸದಸ್ಯ ಡಾ.ಗುರುನಾಥ್ ಅವರು ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

## ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರವೇಶಾವಧಿ ವಿಸ್ತರಣೆ

**ಬೆಂಗಳೂರು, ಆಗಸ್ಟ್ 1 (ಕರ್ನಾಟಕ ವಾರ್ತೆ)**

2017–18 ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ರಾಜ್ಯದ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರವೇಶಾವಧಿಯನ್ನು ವಿಸ್ತರಿಸಿ ಸರ್ಕಾರ ಸುತ್ತೋಲೆ ಹೊರಡಿಸಿದೆ.

ಅನೇಕ ಪಾಲಿಟೆಕ್ನಿಕ್‌ಗಳಲ್ಲಿ ಇನ್ನೂ ಅನೇಕ ಸ್ಥಾನಗಳು ಖಾಲಿ ಇರುವುದಾಗಿ ಸಂಬಂಧಿಸಿದ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ವರದಿ ಮಾಡಿಡಿ ಪ್ರಸ್ತುತ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷಾ ಫಲಿತಾಂಶ ಪ್ರಕಟಗೊಂಡಿರುವುದನ್ನು ಪರಿಗಣಿಸಿ ಪ್ರವೇಶಾವಧಿಯನ್ನು ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೂ ಅನ್ವಯವಾಗುವಂತೆ ಒಟ್ಟಾರೆ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯನ್ನು ಪರಿಗಣಿಸಿ ಪ್ರವೇಶಾವಧಿಯನ್ನು ಆಗಸ್ಟ್ 10 ರವರೆಗೆ ವಿಸ್ತರಿಸಲಾಗಿದೆ.

ವಿಸ್ತರಿಸಲಾದ ಅವದಿಯಲ್ಲಿ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಒಟ್ಟಾರೆ ಶೇ 35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ

ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ ಪ್ರಥಮ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ನಿರ್ದೇಶನಾಲಯಕ್ಕೆ ವರದಿ ಮಾಡಬೇಕು.

ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನ: ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ **http://dte.kar.nic.in** ನ್ನು ಸಂಪರ್ಕಿಸಬಹುದಾಗಿದೆ ಎಂದು ತಾಂತ್ರಿಕ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.